"ನೀರನ್ನು ಮಿತವಾಗಿ ಬಳಸಿ"
"ಕನ್ನಡದಲ್ಲೇ ವ್ಯವಹರಿಸಿ"

Phone : 080-22945102
www.bwssb.karnataka.gov.in

# ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

# BANGALORE WATER SUPPLY & SEWERAGE BOARD

1st Floor, Cauvery Bhavan, K.G.Road, Bangalore-560 009.

No : BWSSB/CHAPM/14-2020/EST32/ **648** /2023-24 Dated: 28.02.24

## ಅಧಿಕೃತ ಜ್ಞಾಪನಾ

ವಿಷಯ: ಮಂಡಳಿಯಲ್ಲಿ ದಿನಾಂಕ: 01.04.2006 ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

ಉಲ್ಲೇಖ:
01. ಸರಕಾರದ ಆದೇಶ ಸಂಖ್ಯೆ: FD(SPL) 04 PET 2005 dated: 31.03.2006.
02 ಮಂಡಳಿಯ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಬೆಂಜಮಂ/ಅಕ/ಮುಆಅ-ಕಾ/61-31-06/3239/2007-08 ದಿನಾಂಕ: 06.12.2007.
03 ಸರಕಾರದ ಆದೇಶ ಸಂಖ್ಯೆ: FD-PEN/99/2023 dated: 24.01.2024.
04 ಮಾನ್ಯ ಅಧ್ಯಕ್ಷ ರವರು ದಿನಾಂಕ: 27.02.2024 ರಂದು ನೀಡಿರುವ ಅನುಮೋದನೆ

**ಪೀಠಿಕೆ:**

ಉಲ್ಲೇಖ(1)ರಲ್ಲಿ ಓದಲಾದ ಸರಕಾರದ ಆದೇಶದಲ್ಲಿ ಹೊಸದಾಗಿ ವ್ಯಾಖ್ಯಾನಿಸಿದ ಅಂಶದಾಯಿ ಕೊಡುಗೆ ವಿಶ್ರಾಂತಿ ವೇತನ ಯೋಜನೆಯನ್ನು ದಿನಾಂಕ: 01.04.2006 ರಂದು ಅಥವಾ ತರುವಾಯ ಸೇವೆಗೆ ಸೇರುವ ಸರಕಾರಿ ನೌಕರರಿಗೆ ಅನ್ವಯಿಸುವಂತೆ ಜಾರಿಗೊಳಿಸಿ ಆದೇಶಿಸಿದೆ. ರಾಜ್ಯ ಸರಕಾರವು ಹೊರಡಿಸಿದ್ದ ಆದೇಶವನ್ನು ಉಲ್ಲೇಖ (2)ರ ಅಧಿಕೃತ ಜ್ಞಾಪನಾದಂತೆ ಮಂಡಳಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲಾಗಿದೆ.

ಮುಂದುವರೆದು, ಉಲ್ಲೇಖ (3)ರಲ್ಲಿ ರಾಜ್ಯ ಸರಕಾರವು 'ದಿನಾಂಕ: 01.04.2006 ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು' ಎಂಬ ಬಗೆಗಿನ ನಡವಳಿಯಲ್ಲಿ ಈ ಮುಂದಿನಂತೆ ಆದೇಶಿಸಿರುತ್ತದೆ:

'ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರಕಾರಿ ನೌಕರರನ್ನು ಸರಕಾರವು ಅವರ ಅಭಿಮತದ ಮೇರೆಗೆ ಕೆಳಕಂಡ ಷರತ್ತಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿದೆ:-

1. ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಸರ್ಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದಲ್ಲಿ ತಮ್ಮ ಅಭಿಮತವನ್ನು ನಿಗಧಿತ ನಮೂನೆಯಲ್ಲಿ ದಿನಾಂಕ: 30.06.2024ರೊಳಗೆ ಸಕ್ಷಮ ನೇಮಕಾತಿ ಪ್ರಾಧಿಕಾರಕ್ಕೆ ನೇರವಾಗಿ ಸಲ್ಲಿಸತಕ್ಕದ್ದು. ಈ ಆಯ್ಕೆಯನ್ನು ಒಂದು ಬಾರಿಗೆ ಮಾತ್ರ ಚಲಾಯಿಸಲು ಅವಕಾಶವಿರುತ್ತದೆ.
2. ಒಂದು ಬಾರಿ ಮಾಡಿಕೊಂಡ ಆಯ್ಕೆಯನ್ನು ಬದಲಾಯಿಸಲು ಅವಕಾಶವಿಲ್ಲ.
3. ಮೇಲಿನ 1 ರಂತೆ ಆಯ್ಕೆಯನ್ನು ಚಲಾಯಿಸಲು ಅರ್ಹ ಸರ್ಕಾರಿ ನೌಕರರು ನಿಗಧಿತ ದಿನಾಂಕದೊಳಗೆ ತಮ್ಮ ಆಯ್ಕೆಯನ್ನು ಚಲಾಯಿಸದೇ ಇದ್ದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಮುಂದುವರೆಯುತ್ತಾರೆ.
4. ನೌಕರರ ಆಯ್ಕೆಗನುಸಾರ ಅವರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಲು ನಿಗಧಿತ ಅರ್ಹತೆಯನ್ನು ಹೊಂದಿರುವುದನ್ನು ಸಕ್ಷಮ ನೇಮಕಾತಿ ಪ್ರಾಧಿಕಾರವು ಖಚಿತಪಡಿಸಿಕೊಂಡು ದಿನಾಂಕ:31.07.2024ರೊಳಗಾಗಿ ಅಂತಹ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ಶಿಫಾರಸ್ಸಿನೊಂದಿಗೆ ಇಲಾಖಾ ಮುಖ್ಯಸ್ಥರಿಗೆ ಕ್ರೋಢೀಕೃತ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.
5. ಇಲಾಖಾ ಮುಖ್ಯಸ್ಥರು ತಮ್ಮ ಅಧೀನದ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಅರ್ಹ ನೌಕರರ ಪಟ್ಟಿಯನ್ನು ದಿನಾಂಕ: 31.08.2024 ರೊಳಗೆ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಸಲ್ಲಿಸತಕ್ಕದ್ದು.
6. ದಿನಾಂಕ: 01.04.2006 ರ ಪೂರ್ವದಲ್ಲಿನ ರಾಜ್ಯ ಸಿವಿಲ್ ಸೇವೆಯಲ್ಲಿನ ಖಾಲಿ ಹುದ್ದೆಗಳಿಗೆ ಹೊರಡಿಸಲಾದ ನೇಮಕಾತಿ ಅಧಿಸೂಚನೆಯನ್ವಯ ಆಯ್ಕೆಯಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ತದನಂತರ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ ಸರಕಾರದ ಅನ್ಯ ಇಲಾಖೆಯಲ್ಲಿನ ಹುದ್ದೆಗೆ ನೇಮಕಾತಿ ಹೊಂದಿದ ಅರ್ಹ ಸರಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ಸೌಲಭ್ಯ ಪಡೆದುಕೊಳ್ಳಲು ಇಚ್ಛಿಸಿದಲ್ಲಿ ಮನವಿಯನ್ನು ಹಿಂದಿನ ನೇಮಕಾತಿ ಪ್ರಾಧಿಕಾರಕ್ಕೆ ದಿನಾಂಕ: 30.06.2024 ರೊಳಗಾಗಿ ಸಲ್ಲಿಸತಕ್ಕದ್ದು. ನೇಮಕಾತಿ ಪ್ರಾಧಿಕಾರವು ಅಂತಹ ಸರಕಾರಿ ನೌಕರನು ಸಮುಚಿತ ಮಾರ್ಗದಲ್ಲಿ ಅರ್ಜಿ ಸಲ್ಲಿಸಿ ಅನ್ಯ ಇಲಾಖೆಗೆ ಆಯ್ಕೆಯಾದ ಹುದ್ದೆಗೆ ವರದಿ ಮಾಡಿಕೊಳ್ಳುವ ಸಲುವಾಗಿ ಬಿಡುಗಡೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಮೇಲಿನ ಕ್ರ.ಸಂ. (4)ರಂತೆ ಪರಿಶೀಲಿಸಿ ಮೇಲಿನ ಕ್ರ.ಸಂ. (5)ರಂತೆ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು' ಎಂಬುದಾಗಿರುತ್ತದೆ.

ಉಲ್ಲೇಖ (2)ರಲ್ಲಿ ಅಧಿಕೃತ ಜ್ಞಾಪನಾದಲ್ಲಿ ಮಂಡಳಿಯ ಮಾನ್ಯ ಅಧ್ಯಕ್ಷರವರಿಗೆ ನೀಡಿರುವ ಅಧಿಕಾರಗಳನ್ವಯ ಸರಕಾರವು ಹೊರಡಿಸಿರುವ ಆದೇಶವನ್ನು ಮಂಡಳಿಯಲ್ಲಿ ಅಳವಡಿಸಿಕೊಂಡು ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ

ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ನೌಕರರನ್ನು ಮಂಡಳಿಯು ಅವರ ಅಭಿಮತದ ಮೇರೆಗೆ ಕೆಳಕಂಡ ಷರತ್ತಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು:-

1. ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ಮಂಡಳಿಯ ಸೇವೆಗೆ ಸೇರಿದ ಸರ್ಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದ್ದಲ್ಲಿ ತಮ್ಮ ಅಭಿಮತವನ್ನು ನಿಗಧಿತ ನಮೂನೆಯಲ್ಲಿ ದಿನಾಂಕ: 30.06.2024ರೊಳಗೆ ಸಕ್ಷಮ ನೇಮಕಾತಿ ಪ್ರಾಧಿಕಾರಕ್ಕೆ ನೇರವಾಗಿ ಸಲ್ಲಿಸತಕ್ಕದ್ದು. ಈ ಆಯ್ಕೆಯನ್ನು ಒಂದು ಬಾರಿಗೆ ಮಾತ್ರ ಚಲಾಯಿಸಲು ಅವಕಾಶವಿರುತ್ತದೆ.
2. ಒಂದು ಬಾರಿ ಮಾಡಿಕೊಂಡ ಆಯ್ಕೆಯನ್ನು ಬದಲಾಯಿಸಲು ಅವಕಾಶವಿಲ್ಲ.
3. ಮೇಲಿನ ಕ್ರ.ಸಂ. 1 ರಂತೆ ಆಯ್ಕೆಯನ್ನು ಚಲಾಯಿಸಲು ಅರ್ಹ ಸರ್ಕಾರಿ ನೌಕರರು ನಿಗಧಿತ ದಿನಾಂಕದೊಳಗೆ ತಮ್ಮ ಆಯ್ಕೆಯನ್ನು ಚಲಾಯಿಸದೇ ಇದ್ದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಮುಂದುವರೆಯುತ್ತಾರೆ.
4. ನೇಮಕಾತಿ ಪ್ರಾಧಿಕಾರಿಯಾದ ಮಾನ್ಯ ಅಧ್ಯಕ್ಷರಿಗೆ ವಿಳಾಸ ಮಾಡಿದ ನಿಗದಿತ ನಮೂನೆಯ ಅಭಿಮತ ಪತ್ರವನ್ನು ಎನ್.ಪಿ.ಎಸ್. ಶಾಖೆಗೆ ಸಲ್ಲಿಸುವುದು. ಸಲ್ಲಿಕೆಯಾಗುವ ಎಲ್ಲಾ ಅಭಿಮತ ಪತ್ರಗಳನ್ನು ಮಂಡಳಿಯ ಎನ್.ಪಿ.ಎಸ್ ಶಾಖೆಯವರು ಕ್ರೋಢಿಕರಿಸಿ, ಸಲ್ಲಿಕೆಯಾಗಿರುವ ಮನವಿಗಳು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ನಿಗದಿತ ಅರ್ಹತೆಯನ್ನು ಹೊಂದಿರುವುದನ್ನು ಖಚಿತಪಡಿಸಿಕೊಳ್ಳಲು ಮಂಡಳಿಯ ಸಹಾಯಕ ಸಿಬ್ಬಂದಿ ವ್ಯವಸ್ಥಾಪಕರ ಶಾಖೆಗೆ ಸಲ್ಲಿಸುವುದು.
5. ಸಹಾಯಕ ಸಿಬ್ಬಂದಿ ವ್ಯವಸ್ಥಾಪಕರ ಶಾಖೆಯವರು ಮೇಲಿನ ಕ್ರ.ಸಂ. 4 ರಂತೆ ಸ್ವೀಕೃತಗೊಳ್ಳುವ ಕ್ರೋಢಿಕೃತ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಪೂರಕ ಮಾಹಿತಿ/ದಾಖಲೆಗಳನ್ನು ಎನ್.ಪಿ.ಎಸ್ ಶಾಖೆಗೆ ಒದಗಿಸುವುದು.
6. ಮೇಲಿನ ಕ್ರ.ಸಂ. 4 ಮತ್ತು ಕ್ರ.ಸಂ. 5 ರಂತೆ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡುವ ಅರ್ಹ ನೌಕರರ ಪಟ್ಟಿಯನ್ನು ದಿನಾಂಕ: 31.08.2024 ರೊಳಗೆ ಆರ್ಥಿಕ ಸಲಹೆಗಾರರು ಹಾಗೂ ಮುಖ್ಯ ಲೆಕ್ಕಾಧಿಕಾರಿ ಇವರ ಸಹಮತಿಯೊಂದಿಗೆ ನೇಮಕಾತಿ ಪ್ರಾಧಿಕಾರಿಯಾದ ಮಾನ್ಯ ಅಧ್ಯಕ್ಷರವರ ಅನುಮೋದನೆಗೆ ಸಲ್ಲಿಸತಕ್ಕದ್ದು.
7. ದಿನಾಂಕ: 01.04.2006 ರ ಪೂರ್ವದಲ್ಲಿನ ರಾಜ್ಯ ಸಿವಿಲ್ ಸೇವೆಯಲ್ಲಿನ ಖಾಲಿ ಹುದ್ದೆಗಳಿಗೆ ಹೊರಡಿಸಲಾದ ನೇಮಕಾತಿ ಅಧಿಸೂಚನೆಗಳನ್ವಯ ಆಯ್ಕೆಯಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ತದನಂತರ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ ಮಂಡಳಿ ಸೇವೆಗೆ ನೇಮಕಾತಿ ಹೊಂದಿದ ಅರ್ಹ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ಸೌಲಭ್ಯ ಪಡೆದುಕೊಳ್ಳಲು ಇಚ್ಛಿಸಿದಲ್ಲಿ ಮನವಿಯನ್ನು ಹಿಂದಿನ ನೇಮಕಾತಿ ಪ್ರಾಧಿಕಾರಕ್ಕೆ ದಿನಾಂಕ: 30.06.2024 ರೊಳಗಾಗಿ ಸಲ್ಲಿಸತಕ್ಕದ್ದು.

ಮುಂದುವರೆದು, ಮಂಡಳಿಯಲ್ಲಿ ದಿನಾಂಕ: 01.04.2006 ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ಸೇವೆಗೆ ಸೇರಿದ ಅರ್ಹ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದಲ್ಲಿ ಈ ಅಧಿಕೃತ ಜ್ಞಾಪನ ಪತ್ರದೊಂದಿಗೆ ಅಡಕಗೊಳಿಸಿರುವ ನಿಗದಿತ ನಮೂನೆಯನ್ನು ಮೇಲೆ ತಿಳಿಸಿರುವ ದಿನಾಂಕದೊಳಗೆ ತಮ್ಮ ಅಭಿಮತವನ್ನು ಸಲ್ಲಿಸತಕ್ಕದ್ದು. ಆಯ್ಕೆಯನ್ನು ಚಲಾಯಿಸದೇ ಇದ್ದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿಯೇ ಮುಂದುವರೆಯಲು ಇಚ್ಛೆ ಇರುವುದಾಗಿ ಪರಿಭಾವಿಸಲಾಗುವುದು.

ಈ ಅಧಿಕೃತ ಜ್ಞಾಪನ ಹಾಗೂ ಅಡಕಗೊಳಿಸಿರುವ ನಮೂನೆಯನ್ನು ಎಲ್ಲಾ ಬಟವಾಡೆ ಅಧಿಕಾರಿಗಳು ತಪ್ಪದೇ ಸಿಬ್ಬಂದಿಗಳ ಗಮನಕ್ಕೆ ತರುವುದು. ತಪ್ಪಿದ್ದಲ್ಲಿ ಮುಂದಿನ ದಿನಗಳಲ್ಲಿ ಯಾವುದೇ ಅರ್ಹ ನೌಕರನಿಂದ ದೂರುಗಳು ಬಂದಲ್ಲಿ ಸಂಬಂಧಪಟ್ಟ ಕಚೇರಿಯ ಮುಖ್ಯಸ್ಥರನ್ನು ಜವಾಬ್ದಾರನ್ನಾಗಿಸಿ, ಶಿಸ್ತುಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು.

28/02/24

ಮುಖ್ಯ ಆಡಳಿತಾಧಿಕಾರಿ ಹಾಗೂ ಕಾರ್ಯದರ್ಶಿ
ಬೆಂಗಳೂರು ಜಲ ಮಂಡಳಿ

27/02/24

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರವರ ಘನ ಅವಗಾಹನೆಗೆ.
2. ಪ್ರಧಾನ ಅಭಿಯಂತರರು ರವರ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಮು.ಅ./ಅ.ಮು.ಅ/ಉಮುಅ ರವರ ಗಮನಕ್ಕಾಗಿ
4. ಆಸ ಮತ್ತು ಮುಲೆಅ ರವರ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಸಿನಿಅ/ಆ.ಅ/ಕಾ.ಅ/ಸಾ.ಸಂ.ಅ/ಎಲ್ಲಾ ಲೆಕ್ಕಾಧಿಕಾರಿಗಳ ರವರ ಗಮನಕ್ಕಾಗಿ.
6. ಸ.ನಿ(ಲೆಕ್ಕ) ರವರ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ಎಲ್ಲಾ ಕಾನಿಅ/ಸಕಾನಿಅ ರವರ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
8. ಸ.ಸಿ.ವ್ಯ. ರವರ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9. ಸಹಾಯಕ ಲೆಕ್ಕಾಧಿಕಾರಿ(ಎನ್‌ಪಿಎಸ್ ಘಟಕ) ರವರ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
10. ಹಿ.ವ್ಯ–1/2 ಅಧ್ಯಕ್ಷರ ಕಚೇರಿ ರವರ ಗಮನಕ್ಕಾಗಿ.
11. ಸಂಬಂಧಪಟ್ಟ ನೌಕರರ ಗಮನಕ್ಕಾಗಿ ಮತ್ತು ಅನುಸರಣೆಗಾಗಿ.
12. ಅಧ್ಯಕ್ಷರು/ಪ್ರಧಾನ ಕಾರ್ಯದರ್ಶಿ, ಬೆಂ.ಜ.ಮಂ ನೌಕರರ ಸಂಘ/ಸ್ಯಾನಿಟರಿ ವರ್ಕರ್ಸ್ ಯೂನಿಯನ್/ ಅಭಿಯಂತರರ ಸಂಘ/ಪ.ಜಾ & ಪ.ಪಂ. ಅಭಿಯಂತರ ಸಂಘ/ಪ.ಜಾ & ಪ.ಪಂ. ನೌಕರರ ಕ್ಷೇಮಾಭಿವೃದ್ಧಿ ಸಂಘ/ಎನ್‌ಪಿಎಸ್ ನೌಕರರ ಸಂಘ ರವರ ಮಾಹಿತಿಗಾಗಿ.

**ಸರಕಾರಿ ಆದೇಶ ಸಂಖ್ಯೆ: FD-PEN/99/2023 dated: 24.01.2024ಕ್ಕೆ ಅನುಬಂಧ**

**ನಮೂನೆ**

ರವರಿಗೆ,

ಮಾನ್ಯ ಅಧ್ಯಕ್ಷರವರು,

ಬೆಂಗಳೂರು ಜಲ ಮಂಡಳಿ.

ಮಾನ್ಯರೆ,

ವಿಷಯ: ದಿನಾಂಕ: 01.04.2006 ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ಸೇವೆಗೆ ಸೇರಿದ ಮಂಡಳಿಯ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

ಉಲ್ಲೇಖ: ಸರಕಾರಿ ಆದೇಶ ಸಂಖ್ಯೆ: FD-PEN/99/2023 dated: 24.01.2024.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ .................. ಆಗಿ ಕಾರ್ಯ ನಿರ್ವಹಿಸುತ್ತಿರುವ ಶ್ರೀಮತಿ/ಶ್ರೀ .......................................... ಆದ ನಾನು, ಪ್ರಪ್ರಥಮವಾಗಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ............... ಹುದ್ದೆಗೆ ದಿನಾಂಕ: ................. ರಂದು ಮಂಡಳಿ ಸೇವೆಯಲ್ಲಿ ವರದಿ ಮಾಡಿಕೊಂಡಿರುತ್ತೇನೆ. ಈ ಹುದ್ದೆಗೆ ನೇಮಕಾತಿ ಅಧಿಸೂಚನೆಯ ಪ್ರಕಟಣೆಯನ್ನು ದಿನಾಂಕ: .................. ರಂದು ಹೊರಡಿಸಲಾಗಿರುತ್ತದೆ. ನಾನು ಉಲ್ಲೇಖಿತ ಆದೇಶದನ್ವಯ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಲು ಅರ್ಹವಿರುವುದರಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ನನ್ನ ಅಭಿಮತವನ್ನು ಈ ಮೂಲಕ ತಿಳಿಸುತ್ತಾ ಈ ಕೆಳಕಂಡ ಮಾಹಿತಿ/ದಾಖಲೆಗಳನ್ನು ಇದರೊಂದಿಗೆ ಸಲ್ಲಿಸುತ್ತಿದ್ದೇನೆ:

1. ಹುದ್ದೆಗಳ ಭರ್ತಿಗಾಗಿ ಪ್ರಕಟಿಸಲಾದ ನೇಮಕಾತಿ ಅಧಿಸೂಚನೆ ದಿನಾಂಕ: .................. ರ ಪ್ರತಿಯನ್ನು ಲಗತ್ತಿಸಿದೆ.
2. ಸಂಬಂಧಪಟ್ಟ ಆಯ್ಕೆಪಟ್ಟಿ ದಿನಾಂಕ: ...................ರ ಪ್ರತಿಯನ್ನು ಲಗತ್ತಿಸಿದೆ.
3. ನೇಮಕಾತಿ ಆದೇಶ ದಿನಾಂಕ: ...................ರ ಪ್ರತಿಯನ್ನು ಲಗತ್ತಿಸಿದೆ.
4. ನೇಮಕಾತಿಯ ನಂತರ ಇಲಾಖೆ ಬದಲಾವಣೆಯಾಗಿದೆಯೇ? ವಿವರಗಳನ್ನು ನೀಡುವುದು
5. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಚೇರಿಯ ವಿಳಾಸ:
6. ಎನ್‌ಪಿಎಸ್ ಪ್ರಾನ್ ಸಂಖ್ಯೆ:
7. ಪ್ರಸ್ತುತ ವೇತನ ಚೀಟಿ:

**(ಸಿಬ್ಬಂದಿ ಸಹಿ ಮತ್ತು ಹೆಸರು)**

**(ಶಿಫಾರಸ್ಸು ಮಾಡುವ ಸಂಬಂಧಪಟ್ಟ ಬಟವಾಡೆ ಅಧಿಕಾರಿಯವರ ಸಹಿ)**

**ದಿನಾಂಕ:**

**ಸ್ಥಳ:**